**FEBRUARY 19, 2025**
**AKASHAVANI - DHARWAD**
**REGIONAL NEWS BULLETIN (KANNADA) 12 P.M.**

**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು,** ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಹಿಂದುಳಿದ ವರ್ಗ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಸಮುದಾಯಗಳ ಮುಖಂಡರೊಂದಿಗೆ ಬಜೆಟ್ ಪೂರ್ವ ಸಭೆ ನಡೆಸಿದರು. ಸಮುದಾಯಗಳ ಕುಂದುಕೊರತೆ, ನಿರೀಕ್ಷೆಗಳನ್ನು ಆಲಿಸಿ, ಈಡೇರಿಕೆಗೆ ಬಜೆಟ್ ಮೂಲಕ ಗರಿಷ್ಠ ಪ್ರಯತ್ನ ನಡೆಸುವುದಾಗಿ, ಮುಖ್ಯಮಂತ್ರಿ ಭರವಸೆ ನೀಡಿದರು.

<><><>

**ಅಟ್ಲಾಂಟಿಕ್ ಮಹಾಸಾಗರವನ್ನು** ಸತತ 52 ದಿನಗಳ ಕಾಲ, ಏಕಾಂಗಿಯಾಗಿ ರೋವಿಂಗ್ ಮಾಡುತ್ತಾ, ದಾಟಿ ದಾಖಲೆಗೈದ ಬೆಂಗಳೂರು ಮೂಲದ ಅನನ್ಯಾ ಪ್ರಸಾದ್ ಅವರ ಸಾಧನೆ, ಇಡೀ ದೇಶಕ್ಕೆ ಹೆಮ್ಮೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶ್ಲಾಘಿಸಿದ್ದಾರೆ. ಅನನ್ಯಾ, ರಾಷ್ಟ್ರಕವಿ ಡಾಕ್ಟರ್ ಜಿ.ಎಸ್.ಶಿವರುದ್ರಪ್ಪ ಅವರ ಮೊಮ್ಮಗಳು ಎನ್ನುವುದು ಇನ್ನಷ್ಟು ಸಂತಸದ ಸಂಗತಿಯಾಗಿದೆ. ಅನಾಥ ಮಕ್ಕಳಿಗೆ ಶಿಕ್ಷಣ ನೀಡುವ ಚಾಮರಾಜನಗರದ ರಾಮಸಮುದ್ರದ ದೀನಬಂಧು ಶಾಲೆಯ ಮಕ್ಕಳ ಭವಿಷ್ಯಕ್ಕಾಗಿ ಅವರು ಈ ಸಾಧನೆಗೈದಿರುವುದು ಅಭಿನಂದನೀಯ ಎಂದು ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ತಿಳಿಸಿದ್ದಾರೆ.

<><><>

**ರೈತರು ಹಾಗೂ ಸಾರ್ವಜನಿಕರ ದೂರುಗಳಿಗೆ** ತ್ವರಿತವಾಗಿ ಸ್ಪಂದಿಸುವುದು ಹಾಗೂ ಕಚೇರಿಗಳಿಗೆ ಅಲೆದಾಟ ತಪ್ಪಿಸುವ ನಿಟ್ಟಿನಲ್ಲಿ ಕಡ್ಡಾಯವಾಗಿ ಇ–ಆಫೀಸ್ ಅನುಷ್ಠಾನಗೊಳಿಸುವಂತೆ ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್ ಸೂಚಿಸಿದ್ದಾರೆ. ಚಿತ್ರದುರ್ಗದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ನಡೆದ ಜನಪ್ರತಿನಿಧಿಗಳ ಸಭೆಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗ ಜಿಲ್ಲೆಗೆ 100 ಸಬ್ ಸ್ಟೇಷನ್‌ಗಳನ್ನು ಕೊಡಲಾಗುತ್ತಿದ್ದು, ಈ ವರ್ಷ 50 ಸಬ್ ಸ್ಟೇಷನ್‌ಗಳು ಪೂರ್ಣಗೊಳ್ಳಲಿದ್ದು, ಮುಂದಿನ ವರ್ಷ ಬಾಕಿ 50 ಸಬ್ ಸ್ಟೇಷನ್‌ಗಳು ಕಾರ್ಯಾರಂಭ ಮಾಡಲಿವೆ. ಪ್ರಸ್ತುತ ರೈತರಿಗೆ 7 ಗಂಟೆಗಳ ವಿದ್ಯುತ್ ಪೂರೈಕೆ ಮಾಡುವಂತೆ ಈಗಾಗಲೇ ಮುಖ್ಯಮಂತ್ರಿಯವರು ಆದೇಶಿಸಿದ್ದಾರೆ. ಹಾಗಾಗಿ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲಿನಲ್ಲಿ 4 ಗಂಟೆ ಹಾಗೂ ರಾತ್ರಿ ವೇಳೆ 3 ಗಂಟೆ ವಿದ್ಯುತ್ ಪೂರೈಕೆ ಮಾಡಲೇಬೇಕು. ಸಬ್‌ಸ್ಟೇಷನ್‌ಗಳ ಸಮಸ್ಯೆ ಇದ್ದರೆ ಆಯಾ ಶಾಸಕರ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸಿಕೊಂಡು, ಅವಶ್ಯಕತೆ ಇದ್ದರೆ ಹೊಸ ಸಬ್‌ಸ್ಟೇಷನ್‌ಗಳಿಗೆ ಪ್ರಸ್ತಾವ ಸಲ್ಲಿಸಿ, ವಿದ್ಯುತ್ ಪೂರೈಕೆಗೆ ಕ್ರಮವಹಿಸಬೇಕು ಎಂದರು.

<><><>

**ಮಲಪ್ರಭಾ ಜಲಾಶಯದಿಂದ ಕಾಲುವೆಗಳಿಗೆ ಹರಿಬಿಡಲಾಗಿರು**ವ ನೀರನ್ನು ಫೆಬ್ರವರಿ 15ರಿಂದ ಸ್ಥಗಿತಗೊಳಿಸುವ ನಿರ್ಧಾರವನ್ನು ರೈತರ ಬೇಡಿಕೆಯ ಹಿನ್ನೆಲೆಯಲ್ಲಿ ಕೈಬಿಟ್ಟು ಮಾರ್ಚ್ 1ರ ವರೆಗೂ ನೀರು ಬಿಡುವಂತೆ ಮಲಪ್ರಭಾ ಯೋಜನಾ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರೂ ಆಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಆದೇಶಿಸಿದ್ದಾರೆ. ಅದರಂತೆ, ಮಲಪ್ರಭಾ ಜಲಾಶಯದಿಂದ ನೀರಾವರಿಗಾಗಿ ಒಳಪಡುವ ಕಾಲುವೆಗಳ ಮುಖಾಂತರ ಫೆಬ್ರವರಿ 14 ರ ವರೆಗೆ 16 ಟಿಎಂಸಿ ನೀರನ್ನು ನೀರಾವರಿ ಉದ್ದೇಶಕ್ಕೆ ರೈತರಿಗೆ ಬಿಡುಗಡೆ ಮಾಡಲಾಗಿದೆ. ಪ್ರಸ್ತುತ ಎರಡೂ ಹಂಗಾಮುಗಳು ಮುಗಿದಿದ್ದರೂ ಸಹ, ನರಗುಂದ ಹಾಗೂ ಬಾದಾಮಿ ಶಾಸಕರು ಮತ್ತು ರೈತ ಮುಖಂಡರು ನೀರನ್ನು ಕಾಲುವೆಗಳಿಗೆ ಮಾರ್ಚ್ 15ರವರೆಗೆ ಮುಂದುವರಿಸುವಂತೆ ಸಚಿವರಲ್ಲಿ ಮನವಿ ಮಾಡಿದ್ದರು. ಅವಶ್ಯಕ ಕುಡಿಯುವ ನೀರಿಗಾಗಿ ಜೂನ್ ಅಂತ್ಯದವರೆಗೆ 15 ಟಿ.ಎಂ.ಸಿ ನೀರನ್ನು ಕಾಯ್ದಿರಿಸಿ ಒದಗಿಸಲು ಸಚಿವರು ಸೂಚಿಸಿದ್ದಾರೆ.

<><><>

**ಧಾರವಾಡದ ಹಿರಿಯ ಗ್ರಂಥಾ**ಲಯ ವಿಜ್ಞಾನಿ, ಬಸವ ತತ್ವ ಅನುಯಾಯಿ, ವಚನಗಳ ಬಗ್ಗೆ ಆಳವಾದ ಅಧ್ಯಯನ ಕೈಗೊಂಡಿರುವ ಪ್ರೊಫೇಸರ್ ಎಸ್.ಆರ್. ಗುಂಜಾಳ ಅವರಿಗೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೊಡ ಮಾಡುವ 2025 ನೇ ಸಾಲಿನ ರಾಷ್ಟ್ರೀಯ ಬಸವ ಪುರಸ್ಕಾರ ಸಂದಿದೆ. ಪುರಸ್ಕಾರ 10 ಲಕ್ಷ ರೂಪಾಯಿ ನಗದು ಹಾಗೂ ಸ್ಮರಣಿಕೆ ಒಳಗೊಂಡಿದೆ. ಪ್ರದೇಶ ಸಮಾಚಾರಕ್ಕಾಗಿ ಪ್ರೊಫೇಸರ್ ಎಸ್.ಆರ್. ಗುಂಜಾಳ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘ,** ಡಾಕ್ಟರ್ ಬಿ.ವ್ಹಿ. ಶಿರೂರ ಸಂಶೋಧನ 2025ರ ಪ್ರಶಸ್ತಿಗೆ, ಹಂಪಿ ಕನ್ನಡ ವಿಶ್ವವಿದ್ಯಾಲಯದ, ಹಸ್ತಪ್ರತಿ ವಿಭಾಗದ ವಿಶ್ರಾಂತ ಪ್ರಾಧ್ಯಾಪಕ, ಹೊಸಪೇಟೆಯ ಡಾಕ್ಟರ್ ಕೆ.ರವೀಂದ್ರನಾಥ ಅವರನ್ನು ಆಯ್ಕೆ ಮಾಡಿದೆ.ಪ್ರಶಸ್ತಿ 10 ಸಾವಿರ ರೂಪಾಯಿ ನಗದು ಹಾಗೂ ಪ್ರಶಸ್ತಿ ಫಲಕ ಒಳಗೊಂಡಿದೆ.

<><><>

**ಕರ್ನಾಟಕ ವಿಜ್ಞಾನ** ಮಹಾವಿದ್ಯಾಲಯದ ಪ್ರಾಣಿಶಾಸ್ತ್ರ ಸ್ನಾತಕ ಅಧ್ಯಯನ ವಿಭಾಗದ ಹೆಸರಾಂತ ಟ್ಯಾಕ್ಸಿಡೆರ್ಮಿಸ್ಟ್, ಮೋಹನ ಮೋರೆ ಧಾರವಾಡದಲ್ಲಿ ನಿಧನರಾಗಿದ್ದಾರೆ. ಹಿರಿಯ ಅಥ್ಲೇಟಿಕ್ ಕ್ರೀಡಾಪಟುವಾಗಿದ್ದ, ಅವರ ಪಾರ್ಥಿವ ಶರೀರದ ಅಂತ್ಯಕ್ರಿಯೆ ಇಂದು ಮಧ್ಯಾಹ್ನ 12.30 ಕ್ಕೆ ಧಾರವಾಡದಲ್ಲಿ ಜರುಗಲಿದೆ.

<><><>

**ಕಾರವಾರದ ಸೀ ಬರ್ಡ್ ನೌಕಾ ನೆಲೆಯ,** ಸೂಕ್ಷ್ಮ ಮಾಹಿತಿಯನ್ನು, ಪಾಕಿಸ್ಥಾನಕ್ಕೆ ನೀಡಿದ ಆರೋಪದ ಮೇಲೆ, ರಾಷ್ಟ್ರೀಯ ತನಿಖಾ ಸಂಸ್ಥೆ, ಎನ್.ಐ.ಎ., ಹೈದ್ರಾಬಾದ್ ಘಟಕದ ಅಧಿಕಾರಿಗಳು, ಕಾರವಾರದ ಇಬ್ಬರನ್ನು ಬಂಧಿಸಿದ್ದಾರೆ. ಪಾಕಿಸ್ಥಾನದ ಏಜೆನ್ಸಿಗಳು, ಹನಿ ಟ್ರ್ಯಾಪ್ ಮೂಲಕ, ಬಂಧಿತ ಆರೋಪಿಗಳಿಂದ ಮಾಹಿತಿ ಕಲೆ ಹಾಕಿದ್ದರು ಎನ್ನಲಾಗಿದೆ.

<><><>